ದಿನಾಂಕ 30-05-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಅರ್ಜಿದಾರರ ಪರ ಶ್ರೀ ಎಸ್.ಎಸ್.ಎ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನೋಡಿ ಗುರುತಿಸುತ್ತೇನೆ.

| | |
|---|---|
| ನಿ.ಪಿ-1 | ಅಲಭ್ಯ ಪ್ರಮಾಣ ಪತ್ರ, |
| ನಿ.ಪಿ-2 ರಿಂದ 4 | ಆಧಾರ ಕಾರ್ಡಗಳ ನೋಟರಿ ಪ್ರತಿಗಳು |
| ನಿ.ಪಿ-5 ಮತ್ತು 6 | ಹೊಸದಿಗಂತ ಮತ್ತು ಪ್ರಥಮ ಹೆಜ್ಜೆ ದೈನಂದಿನ ಪತ್ರಿಕೆಗಳಲ್ಲಿ ಪ್ರಕಟಣೆಗೊಂಡ ಸಾರ್ವಜನಿಕ ಪ್ರಕಟಣೆ. |

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

sD/-
ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.